**ದಿನಾಂಕಃ 03.06.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 1ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಆ ದಿನ ನಾನು ಆಡುಗೋಡಿಯಿಂದ ಅಂಜನಾದ್ರಿ ಲೇಔಟ್ ಕಡೆಗೆ ಹೋಗುತ್ತಿದ್ದೆನು. ನಾನು ವಾಹನವನ್ನು ಅತೀವೇಗವಾಗಿ ಚಾಲನೆ ಮಾಡಿಕೊಂಡು ಹೋಗಿ ನಾನೇ ಸ್ವತಃ ಬಿದ್ದು ಗಾಯಪಡಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ಆಪಾದಿತ ಕಾರು ಭಾಗಿಯಾಗಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನ್ನ ವಾಹನದ ಮುಂಭಾಗಕ್ಕೆ ಜಖಂ ಆಗಿದೆ ಎಂದರೆ ಸರಿ. ಕಾರಿನ ಮಾಲೀಕರು ಮತ್ತು ಪೊಲೀಸರೊಂದಿಗೆ ಶಾಮೀಲಾಗಿ ಆಪಾದಿತ ಕಾರಿನ ವಿರುದ್ದ ಸುಳ್ಳು ಪ್ರಕರಣ ದಾಖಲಿಸುವಂತೆ ಮಾಡಿರುತ್ತೇವೆ ಎಂದರೆ ಸರಿಯಲ್ಲ. ದೂರನ್ನು ಒಂದು ದಿನ ತಡವಾಗಿ ನೀಡಲಾಗಿದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನಾನು ಚಿಕಿತ್ಸೆ ಪಡೆಯುತ್ತಿದ್ದ ಕಾರಣ ಅಪಘಾತವಾದ ಮರುದಿನ ದೂರು ನೀಡಿರುತ್ತೇನೆ ಎಂದು ನುಡಿಯುತ್ತಾರೆ. ಕಾರನ್ನು ಸುಳ್ಳಾಗಿ ಸೇರ್ಪಡೆ ಮಾಡುವ ಕಾರಣ ತಡವಾಗಿ ದೂರು ನೀಡಲಾಗಿದೆ ಎಂದರೆ ಸರಿಯಲ್ಲ.

ಅಪಘಾತವಾದ ನಂತರ ನಾನು ಮೊದಲು ಯೂನಿಟಿ ಲೈಫ್ ಲೈನ್ ಆಸ್ಪತ್ರೆಗೆ ಹೋಗಿರುತ್ತೇನೆ. ಸದರಿ ಆಸ್ಪತ್ರೆಯಲ್ಲಿ ಅಪಘಾತ ಹೇಗೆ ಸಂಭವಿಸಿತು ಎಂದು ತಿಳಿಸಿರುತ್ತೇನೆ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಗಿವೆ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಈಗಲೂ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಸಾಮಾನ್ಯ ಸ್ವರೂಪದ ಗಾಯಗಳು ಆಗಿದ್ದವು ಎಂದರೆ ಸರಿಯಲ್ಲ. ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ಬಿಡುಗಡೆ ಸಮರಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಒಳರೋಗಿಯಾಗಿ ದಾಖಲಾಗದ ಕಾರಣ ಸಂಬಂಧಪಟ್ಟ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ವೈದ್ಯಕೀಯ ವೆಚ್ಚವನ್ನು ಮರುಪಾವತಿ ಪಡೆದಿರುತ್ತೇನೆ ಎಂದರೆ ಸಾಕ್ಷಿಯು ಸ್ವಲ್ಪ ಮಾತ್ರ

ಬಂದಿರುತ್ತದೆ ಎಂದು ನುಡಿಯುತ್ತಾರೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ, ಲಭ್ಯವಾದಲ್ಲಿ ಹಾಜರುಪಡಿಸಲು ತೊಂದರೆ ಇಲ್ಲ. ಸುಮಾರು ರೂ.40,000/- ಗಳಷ್ಟು ಹಣ ಮರುಪಾವತಿಯಾಗಿರುತ್ತದೆ. ವೈದ್ಯಕೀಯ ವೆಚ್ಚವು ಮೆಡಿ ಅಸಿಸ್ಟ್ ನಿಂದ ಮರುಪಾವತಿಯಾಗಿರುತ್ತದೆ. ನಾನು ಹೆಚ್ಚುವರಿಯಾಗಿ ನೀಡಿರುವ ಮೆಡಿಕಲ್ ಬಿಲ್ಲುಗಳ ಮೊತ್ತ ಮರುಪಾವತಿಯಾಗಿರುತ್ತದೆ ಎಂದರೆ ಸರಿಯಲ್ಲ. ಪ್ರಮಾಣ ಪತ್ರದ ಖಂಡಿಕೆ 5 ರಲ್ಲಿ ಹೇಳಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ. ಚಿಕಿತ್ಸೆಗೆ ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಮುಂದುವರೆದ ಶಸ್ತ್ರ ಚಿಕಿತ್ಸೆ ಆಗಬೇಕಾಗಿದೆ ಎಂದು ಹೇಳಿದ್ದು, ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಮುಂದುವರೆದ ಚಿಕಿತ್ಸೆಗೆ ನಾನು ಹೇಳುವಷ್ಟು ಹಣದ ಅವಶ್ಯಕತೆ ಇಲ್ಲ ಎಂದರೆ ಸರಿಯಲ್ಲ.

ನಾನು ಯಾವುದೇ ಕೆಲಸ ಮಾಡುತ್ತಿಲ್ಲ. ಅಪಘಾತವಾಗುವ ಮೊದಲು ನಾನು ಅಮೆಜಾನ್ ನಲ್ಲಿ ಸಹಾಯಕ ಆಪರೇಟರ್ ಆಗಿ ಕೆಲಸ ಮಾಡುತ್ತಿದ್ದೆನು. ಸದರಿ ಕಂಪನಿಯಲ್ಲಿ ಗುತ್ತಿಗೆ ಆಧಾರದ ಮೇರೆಗೆ 2024ರಲ್ಲಿ ನೇಮಕಗೊಂಡಿದ್ದೆನು. ಅಮೆಜಾನ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಬಗ್ಗೆ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಮತ್ತು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ನನ್ನನ್ನು ಕೆಲಸದಿಂದ ತೆಗೆದುಹಾಕಿದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಆ ಬಗ್ಗೆ ಸಂಬಂಧಪಟ್ಟ ವ್ಯಕ್ತಿಯನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇದೆಯಾ ಎಂದರೆ ಸಾಕ್ಷಿಯು ನನಗೆ ಅವರ ಸಂಪರ್ಕ ಈಗ ಇಲ್ಲ ಎಂದು ನುಡಿಯುತ್ತಾರೆ. ನಾನು ಕೆಲಸ ಮಾಡುತ್ತಿದ್ದ ಕಂಪನಿಯ ವಿಳಾಸ ಬಾಗಮನಿ ಟೆಕ್ ಪಾರ್ಕ್, ಮಹದೇವಪುರ, ಬೆಂಗಳೂರು ಆಗಿತ್ತು. ಸದರಿ ಕಂಪನಿಯಲ್ಲಿ ನಾನು ಕೆಲಸ ಮಾಡುವಾಗ ನಿಧಿ ಎಂಬುವವರು ವ್ಯವಸ್ಥಾಪಕರಾಗಿದ್ದರು. ವೇತನವನ್ನು ನನ್ನ ಖಾತೆಗೆ ಹಾಕುತ್ತಿದ್ದರು. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಕಂಪನಿಯಿಂದ

ನನಗೆ ತೆಗೆದುಹಾಕುವ ಬಗ್ಗೆ ನೋಟೀಸು ನೀಡಿಲ್ಲ. ನಾನು ಈಗಲೂ ಅಮೆಜಾನ್ ಕಂಪನಿಯಲ್ಲಿಯೇ ಕೆಲಸ ಮಾಡುತ್ತಿದ್ದೇನೆ ಎಂದರೆ ಸರಿಯಲ್ಲ. ದಾಖಲಾತಿಗಳನ್ನು ಹಾಜರುಪಡಿಸಿದಲ್ಲಿ ಸತ್ಯಾಂಶ ತಿಳಿದು ಬರುತ್ತದೆ ಎಂಬ ಕಾರಣಕ್ಕಾಗಿ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ಆರ್ಥಿಕ ನಷ್ಟ ಉಂಟಾಗಿಲ್ಲ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**